# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 699 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 18.08.2025 |
| ಉತ್ತರಿಸಬೇಕಾಗಿರುವ ಸಚಿವರು | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಚಿಕ್ಕಮಗಳೂರು ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳೆಷ್ಟು; ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು; ನಿಯೋಜನೆ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರ ಮತ್ತು ಸಿಬ್ಬಂದಿಗಳ ಸಂಪೂರ್ಣ ಮಾಹಿತಿ ನೀಡುವುದು; | ಚಿಕ್ಕಮಗಳೂರು ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಒಟ್ಟು ಸಂಖ್ಯೆ **90.** ಸದರಿ **ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ** ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿ :<br>ಗ್ರೂಪ್ - ಎ – **79**<br>ಗ್ರೂಪ್ - ಬಿ – ಹುದ್ದೆ ಮಂಜೂರಾಗಿರುವುದಿಲ್ಲ<br>ಗ್ರೂಪ್ - ಸಿ - **392**<br>ಗ್ರೂಪ್ - ಡಿ - **73 (ಖಾಯಂ) ಹಾಗೂ**<br>**166 – (ಹೊರಗುತ್ತಿಗೆ ಗ್ರೂಪ್ ಡಿ)**<br><br>ನಿಯೋಜನೆ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರು ಹಾಗೂ ಸಿಬ್ಬಂದಿಗಳು ಯಾರೂ ಇರುವುದಿಲ್ಲ. |
| ಆ | ಈ ಜಿಲ್ಲೆಯಲ್ಲಿರುವ ತಾಲ್ಲೂಕು ಆಸ್ಪತ್ರೆಗಳಲ್ಲಿ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿಯಿರುವ ವಿವಿಧ ದರ್ಜೆಯ ಹುದ್ದೆಗಳನ್ನು ತ್ವರಿತಗತಿಯಲ್ಲಿ ನೇಮಕಾತಿಗೊಳಿಸಲು ಇರುವ ಸರ್ಕಾರದ ಸಕಾಲಿಕ ಕ್ರಮಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು) | ಪ್ರತಿಯೊಂದು ಜಿಲ್ಲಾ, ತಾಲ್ಲೂಕು ಅಥವಾ ಇತರೇ ಆರೋಗ್ಯ ಕೇಂದ್ರಗಳಿಗೆಂದೇ ಪ್ರತ್ಯೇಕವಾಗಿ ನೇರ ನೇಮಕಾತಿ ಮಾಡಿಕೊಳ್ಳಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.<br><br>**ಇಲಾಖೆಯಲ್ಲಿ ಖಾಲಿ ಇರುವ ವೈದ್ಯಕೀಯ ಹಾಗೂ ಅರೆ ವೈದ್ಯಕೀಯ ಮತ್ತು ಇತರೆ ಸಿಬ್ಬಂದಿಗಳ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಈ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗುತ್ತಿದೆ.** |
| ಇ | ಸರ್ಕಾರಿ ವ್ಯಾಪ್ತಿಯ ಆರೋಗ್ಯ ಸೇವೆಯನ್ನು ಗ್ರಾಮೀಣರು ಹೆಚ್ಚಿನ ಪ್ರಮಾಣದಲ್ಲಿ ಅವಲಂಬಿಸಿರುವುದರಿಂದ ಸರ್ಕಾರದ ಆದ್ಯತೆಯ ಮೇರೆಗೆ ಸಿಬ್ಬಂದಿ ವರ್ಗ ಮತ್ತು ಮೂಲಸೌಕರ್ಯ ಸೌಲಭ್ಯಗಳನ್ನು ಒದಗಿಸಿಕೊಟ್ಟು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು; | 1. ಇಲಾಖೆಯಲ್ಲಿ ಖಾಲಿಯಿರುವ 120 ತಜ್ಞ ವೈದ್ಯರು ಮತ್ತು 100 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ನೇರನೇಮಕಾತಿ ಮುಖಾಂತರ ಭರ್ತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಯು ಟಿಪ್ಪಣಿ ಸಂ:ಆಇ 625 ವೆಚ್ಚ-5/2024, ದಿನಾಂಕ:06.06.2024ರಲ್ಲಿ ಸಹಮತಿ ನೀಡಿದ್ದು, ಅದರಂತೆ ನೇಮಕಾತಿ ಮಾಡಲು ಪರಿಶೀಲಿಸಲಾಗುತ್ತಿದೆ.<br>2. ಸರ್ಕಾರದ ಪತ್ರ ಸಂಖ್ಯೆ:ಆಕುಕ 453 ಹೆಚ್‌ಎಸ್‌ಹೆಚ್ 2022, ದಿನಾಂಕ:13.12.2022ರಲ್ಲಿ ರಾಜ್ಯದ ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳನ್ನು ಹೊರತುಪಡಿಸಿ ಇತರ ಜಿಲ್ಲೆಗಳಲ್ಲಿನ ಗ್ರಾಮೀಣ ಪ್ರದೇಶಗಳ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಖಾಲಿಯಿರುವ ತಜ್ಞ ವೈದ್ಯರು ಮತ್ತು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಚಾಲ್ತಿಯಲ್ಲಿರುವ ಸರ್ಕಾರದ ಆದೇಶಗಳಡಿ ಗುತ್ತಿಗೆ ಆಧಾರದ ಮೇಲೆ ಜಿಲ್ಲಾಧಿಕಾರಿಗಳ ಹಂತದಲ್ಲಿ ನಿಯಾಮಾನುಸಾರ ಭರ್ತಿ ಮಾಡಲು ಅನುಮತಿ ನೀಡಲಾಗಿದೆ. |

3. ಆದೇಶ ಸಂಖ್ಯೆ:ಆಕುಕ 1072 ಎಚ್‌ಎಸ್‌ಎಚ್ 2024, ದಿನಾಂಕ:01.01.2025 ರಲ್ಲಿ, ಇಲಾಖೆಯಲ್ಲಿ Hiring on for day basis, Hiring at AB-Ark rates and Hiring for per-case basis ವಿಧಾನದಡಿ ಸೇವೆ ಪಡೆಯಲು ತಜ್ಞ ರ ಸೇವೆಯನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ.
4. ಸರ್ಕಾರದ ಆದೇಶ ಸಂಖ್ಯೆ:ಆಕುಕ 619 ಹೆಚ್‌ಎಸ್‌ಹೆಚ್ 2022, ದಿ:17.01.2024ರಲ್ಲಿ ಆಕುಕ ಇಲಾಖೆಯಲ್ಲಿ ಖಾಲಿ ಇರುವ 337 ತಜ್ಞ ವೈದ್ಯರನ್ನು ಮತ್ತು 250 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ಕೆಲವು ಷರತ್ತುಗಳಿಗೊಳಪಟ್ಟು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅನುಮತಿ ನೀಡಲಾಗಿದೆ.
5. ಇಲಾಖೆಯ ಮುಖಾಂತರ ಸೇವಾನಿರತ ಸ್ನಾತಕೋತ್ತರ ವ್ಯಾಸಂಗ ಪೂರೈಸಿ ಬರುವ ತಜ್ಞ ವೈದ್ಯರನ್ನು ತಜ್ಞತೆ ಹುದ್ದೆಗೆ ನೇಮಿಸಲಾಗುತ್ತಿದೆ.
6. ಸ್ನಾತಕೋತ್ತರ ವ್ಯಾಸಂಗವನ್ನು ಪೂರೈಸಿ 1 ವರ್ಷದ ಕಡ್ಡಾಯ ಸೇವೆಗಾಗಿ ಬರುವ ವೈದ್ಯ ಅಭ್ಯರ್ಥಿ/ತಜ್ಞ ವೈದ್ಯ ಅಭ್ಯರ್ಥಿಗಳನ್ನು ನೇಮಕ ಮಾಡುವ ಮೂಲಕ ವೈದ್ಯರ/ತಜ್ಞರುಗಳ ಕೊರತೆಯನ್ನು ನೀಗಿಸಲು ಕ್ರಮಕೈಗೊಳ್ಳಲಾಗುತ್ತಿದೆ.
7. ಅಧಿಸೂಚನೆ ಸಂಖ್ಯೆ : ಆಕುಕ 709 ಹೆಚ್‌ಎಸ್‌ಎಂ 2017, ದಿನಾಂಕ : 17/05/2022ರಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ ವಿವಿಧ ವೃಂದದ 320 ಅರೆ ವೈದ್ಯಕೀಯ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿಗೆ ಅನುಮತಿ ನೀಡಲಾಗಿದ್ದು, ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿದೆ.
8. ಕಿರಿಯ ವೈದ್ಯಕೀಯ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿ 150 ಮತ್ತು ಫಾರ್ಮಸಿ ಅಧಿಕಾರಿ 400 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವವರೆಗೂ ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಕ್ರಮವಹಿಸಲಾಗಿದೆ.
9. ಕರ್ನಾಟಕ ಲೋಕಸೇವಾ ಆಯೋಗದಿಂದ ಆಯ್ಕೆಯಾದಂತಹ 427 ದ್ವಿತೀಯ ದರ್ಜೆ ಸಹಾಯಕರ ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡಿದೆ.
10. ಅನುಕಂಪ ಆಧಾರದಡಿ ನೇರ ನೇಮಕಾತಿ ಮೂಲಕ ಒಟ್ಟು 225 ಅರೆ ವೈದ್ಯಕೀಯ ಮತ್ತು ಇತರೆ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ.
11. ಮಾನ್ಯ ಜಿಲ್ಲಾಧಿಕಾರಿಗಳ ಮುಖಾಂತರ ಖಾಲಿ ಇರುವ ಹುದ್ದೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ವೈದ್ಯಾಧಿಕಾರಿಗಳನ್ನು ಹಾಗೂ ಎನ್.ಹೆಚ್.ಎಂ ಅಡಿ ತಜ್ಞ ವೈದ್ಯರನ್ನು/ಶುಶ್ರೂಷಕಿಯರನ್ನು/ಗ್ರೂಪ್-ಡಿ, ವಾಹನ ಚಾಲಕರನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿಗೊಳಿಸಿ ಕ್ರಮ ಜರುಗಿಸಲಾಗಿದೆ.
12. ಆರ್ಥಿಕ ಇಲಾಖೆಯ ಸಂಖ್ಯೆ:ಆಇ 625 ವೆಚ್ಚ 5 2024, ದಿನಾಂಕ;06.06.2024ರ ಟಿಪ್ಪಣಿಯಲ್ಲಿ, ಇಲಾಖೆಯಲ್ಲಿ ಮಂಜೂರಾಗಿ ಖಾಲಿ ಇರುವ 120 ತಜ್ಞ ವೈದ್ಯರು ಮತ್ತು 100 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಯು ಸಹಮತಿಸಿದ್ದು, ಅದರಲ್ಲಿ ತಿಳಿಸಿರುವ ಷರತ್ತುಗಳಂತೆ ಭರ್ತಿ ಮಾಡಿಕೊಳ್ಳಲು ಕರಡು ನೇಮಕಾತಿ ನಿಯಮಗಳನ್ನು ರೂಪಿಸಲಾಗುತ್ತಿದೆ.

| | | |
|---|---|---|
| | | ಇದಲ್ಲದೇ ನಿಯಮಾನಸಾರ ನೇರ ನೇಮಕಾತಿ, ಗುತ್ತಿಗೆ ಆಧಾರದಡಿ ತಜ್ಞ ವೈದ್ಯರು, ವೈದ್ಯರು ಹಾಗೂ ಇತರೆ ಹುದ್ದೆಗಳನ್ನು ಭರ್ತಿ ಮಾಡಲು ಸಹ ಕ್ರಮಕೈಗೊಳ್ಳಲಾಗುತ್ತಿದೆ.<br>ಮೇಲ್ಕಂಡಂತೆ ಕ್ರಮಗಳನ್ನು ಕೈಗೊಂಡು ರೋಗಿಗಳಿಗ ಆಡಚಣೆಯಾಗದಂತೆ ಚಿಕಿತ್ಸೆ ನೀಡಲಾಗುತ್ತಿದ್ದು, ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಲಾಗುತ್ತಿದೆ. |
| ಈ | ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿ ಮಹಿಳೆಯರು ಮತ್ತು ಮಕ್ಕಳು ಹೆಚ್ಚಿನ ಪ್ರಮಾಣದಲ್ಲಿ ಆಸ್ಪತ್ರೆಗಳನ್ನೇ ಅವಲಂಬಿಸಿದ್ದು, ಆಸ್ಪತ್ರೆಗಳಲ್ಲಿ ಸಾರ್ವಜನಿಕರಿಗೆ ಗುಣಮಟ್ಟದ ಮತ್ತು ಸುವ್ಯವಸ್ಥಿತ ಆರೋಗ್ಯ ಸೇವಾ ಸೌಲಭ್ಯಗಳನ್ನು ಒದಗಿಸಿಕೊಡುವಲ್ಲಿ ಸರ್ಕಾರದ ಮುಂದಿರುವ ಪ್ರಸ್ತಾವನೆಗಳು ಮತ್ತು ಕ್ರಮಗಳು ಯಾವುವು? (ಸಂಪೂರ್ಣವಾದ ಮಾಹಿತಿ ನೀಡುವುದು) | ತಾಯಿ ಮತ್ತು ಮಕ್ಕಳ ಆಸ್ಪತ್ರೆಗಳಿಗೆ ಮಹಿಳೆಯರು ಮತ್ತು ಮಕ್ಕಳು ಹೆಚ್ಚಿನ ಪ್ರಮಾಣದಲ್ಲಿ ಬರುತ್ತಿದ್ದು ಆಸ್ಪತ್ರೆಗಳಲ್ಲಿ ಸಾರ್ವಜನಿಕರಿಗೆ ಗುಣಮಟ್ಟದ ಮತ್ತು ಸುವ್ಯವಸ್ಥಿತ ಆರೋಗ್ಯ ಸೇವೆ ಸೌಲಭ್ಯಗಳನ್ನು ಒದಗಿಸಲು ಈಗಾಗಲೇ ಕ್ರಮಗಳನ್ನು ಕೈಗೊಳ್ಳಲಾಗಿದೆ. **ವಿವರಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ.** |

**ಆಕುಕ 71 ಎಚ್‌ಎಸ್‌ಡಿ 2025**

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

ಅನುಬಂಧ-1 (ಪ್ರಶ್ನೆ ಸಂಖ್ಯೆ-699)

ರಾಜ್ಯದ ಎಲ್ಲಾ ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿ ಗುಣಮಟ್ಟದ ಮತ್ತು ಸುವ್ಯವಸ್ಥಿತ ಆರೋಗ್ಯ ಸೇವೆಗಳನ್ನು ಒದಗಿಸಿಕೊಡುವಲ್ಲಿ ಸರ್ಕಾರವು ಕೆಳಕಂಡ ಕಾರ್ಯ ಕ್ರಮಗಳನ್ನು ಅನುಷ್ಠಾನಗೊಳಿಸಿದೆ:

1. **ಕಾಯಕಲ್ಪ ಯೋಜನೆ:** ಈ ಯೋಜನೆ ಅಡಿಯಲ್ಲಿ ಎಲ್ಲಾ ಸರ್ಕಾರಿ ಆರೋಗ್ಯ ಸಂಸ್ಥೆಗಳಲ್ಲಿ ಗುಣಮಟ್ಟದ ಸೇವಾ ಸೌಲಭ್ಯಗಳನ್ನು ನೀಡುವ ಬಗ್ಗೆ ಮತ್ತು ಆರೋಗ್ಯ ಸಂಸ್ಥೆಗಳಲ್ಲಿ ಶುಚಿತ್ವ ಹಾಗು ನೈರ್ಮಲ್ಯ ಕಾಪಾಡುವಿಕೆ ಮತು ಸೋಂಕು ತಡೆಗಟ್ಟುವಿಕೆಯ ಬಗ್ಗೆ ಆರೋಗ್ಯ ಸಂಸ್ಥೆಗಳು ಕಾಯಕಲ್ಪ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಿರುತ್ತವೆ ಮತ್ತು ಬಾಹ್ಯ ಮೌಲ್ಯಮಾಪನ ತಂಡಗಳು ಸಂಸ್ಥೆಗಳನ್ನು ಮೌಲ್ಯಮಾಪನವನ್ನು ಕೈಗೊಳ್ಳುತ್ತವೆ ಮತ್ತು ವಾರ್ಷಿಕ ಪ್ರಶಸ್ತಿಗೆ ಅರ್ಹರಾಗುತ್ತವೆ. ಒಟ್ಟು 148 ತಾಲ್ಲೂಕ ಮಟ್ಟದ ಆಸ್ಪತ್ರೆಗಳಲ್ಲಿ 83 ತಾಲ್ಲೂಕು ಆಸ್ಪತ್ರೆಗಳು ಕಾಯಕಲ್ಪ ಪ್ರಶಸ್ತಿಯನ್ನು ಕಳೆದ ವರ್ಷದಲ್ಲಿ ಪಡೆದಿರುತ್ತವೆ.

2. **NQAS:** ಗುಣಮಟ್ಟದ ಸೇವಾ ಸೌಲಭ್ಯಗಳನ್ನು ನೀಡುತ್ತಿರುವ ಬಗ್ಗೆ NQAS (ರಾಷ್ಟ್ರ ಗುಣ ಮಟ್ಟ ಖಾತ್ರಿ ಪ್ರಮಾಣಿತ) ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ. ಒಟ್ಟು 148 ತಾಲ್ಲೂಕು ಆಸ್ಪತ್ರೆಗಳಲ್ಲಿ 65 ಆಸ್ಪತ್ರೆಗಳು NQAS ಅಡಿಯಲ್ಲಿ ಪ್ರಾಮಾಣೀಕರಣಗೊಂಡಿರುತ್ತವೆ (Certification).

3. **ಲಕ್ಷ್ಯ ಕಾರ್ಯಕ್ರಮ:** ಗರ್ಭಿಣಿ ಬಾಣಂತಿ ಮತ್ತು ನವಜಾತು ಶಿಶುಗಳ ಆರೈಕೆಯಲ್ಲಿ ಗುಣಮಟ್ಟ ಸಾಧಿಸಲು ಲಕ್ಷ್ಯ ಕಾರ್ಯಕ್ರಮವು ಅನುಷ್ಠಾನಗೊಂಡಿದ್ದು ಒಟ್ಟು 148 ತಾಲ್ಲೂಕು ಆಸ್ಪತ್ರೆಗಳಲ್ಲಿ 88 ಆಸ್ಪತ್ರೆಗಳು ಪ್ರಾಮಾಣೀಕರಣಗೊಂಡಿರುತ್ತವೆ (Certification).

4. **ಮುಸ್ಕಾನ್ (MusQan):** ಶಿಶು ಮತ್ತು ಮಕ್ಕಳ ಆರೈಕೆಯಲ್ಲಿ ಗುಣಮಟ್ಟವನ್ನು ಸಾಧಿಸಲು ಮುಸ್ಕಾನ್ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗಿದೆ. ಪ್ರಸ್ತುತ ಈ ಕಾರ್ಯಕ್ರಮವು ಎಲ್ಲಾ ಜಿಲ್ಲಾ ಮಟ್ಟದಲ್ಲಿ ಹಾಗು ತಾಲ್ಲೂಕು ಮಟ್ಟದ ಆಸ್ಪತ್ರೆಯಲ್ಲಿ ಅನುಷ್ಠಾನಗೊಳಿಸಲಾಗಿದೆ. ಪ್ರಸ್ತುತ 18 ತಾಲ್ಲುಕು ಮಟ್ಟದ ಆಸ್ಪತ್ರೆಗಳು ಪ್ರಾಮಾಣೀಕರಣವನ್ನು ಸಾಧಿಸಿರುತ್ತವೆ.

5. **ತಾಯಿ ಮತ್ತು ಮಕ್ಕಳ ಆಸ್ಪತ್ರೆಗಳು:** ಗುಣಮಟ್ಟದ ಸೇವೆಗಳನ್ನು ಮಹಿಳೆಯರಿಗೆ ಮತ್ತು ಮಕ್ಕಳಿಗೆ ಒದಗಿಸಲು ಭಾರತ ಸರ್ಕಾರದ ಮಾನದಂಡಗಳ ಅನ್ವಯ ನೂತನ ತಾಯಿ ಮತ್ತು ಮಕ್ಕಳ ಆಸ್ಪತ್ರೆಗಳನ್ನು ಸ್ಥಾಪಿಸಲಾಗಿದೆ. ಇದುವರೆವಿಗೂ 50 ತಾಯಿ ಮತ್ತು ಮಕ್ಕಳ ಆಸ್ಪತ್ರೆಗಳನ್ನು ತಾಲ್ಲುಕು ಮಟ್ಟದಲ್ಲಿ ಮಂಜೂರಾಗಿದ್ದು ಇವುಗಳಲ್ಲಿ 34 ಆಸ್ಪತ್ರೆಗಳು ಕಾರ್ಯರಂಭ ಮಾಡಿದೆ ಹಾಗು 16 ಆಸ್ಪತ್ರೆಗಳು ನಿರ್ಮಾಣ ಹಂತದಲ್ಲಿರುತ್ತವೆ.

6. ಗುಣಮಟ್ಟದ ಮತ್ತು ಸುವ್ಯವಸ್ಥಿತ ಸೇವೆಗಳನ್ನು ಒದಗಿಸುವಲ್ಲಿ ಅವಶ್ಯವಿರುವ ಉಪಕರಣ ಸಲಕರಣೆಗಳನ್ನು ಸರಬರಾಜು ಮಾಡಲಾಗುತ್ತಿದೆ.
ಗುಣಮಟ್ಟದ ಸೇವೆ ನೀಡಲು ಶುಶ್ರೂಷಕರು ಮತ್ತು ವೈದ್ಯರಿಗೆ ತರಬೇತಿಯನ್ನು ಆಗಿಂದಾಗ್ಗೆ ನೀಡಲಾಗುತ್ತಿದೆ.
ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಮಹಿಳೆಯರು ಮತ್ತು ಮಕ್ಕಳಿಗೆ ಗುಣಮಟ್ಟದ ಸೇವೆ ನೀಡಲು ಕೆಳಕಂಡ ಮಾರ್ಗಗಳನ್ನು ಅನುಸರಿಸಲಾಗಿದೆ:

- ವ್ಯವಸ್ಥಿತ SOPs ಗಳ ಅಳವಡಿಕೆ ಮತ್ತು ಪಾಲನೆ.
- Standard Treatment Guidelines (STGs) ಪಾಲನೆ.
- Key performance indicator ಗಳ ಪ್ರತಿ ತಿಂಗಳ ಮಾಪನ.
- ಔಷಧಿ ಮತ್ತು ಚುಚ್ಚುಮದ್ದುಗಳನ್ನು ನೀಡುವ ಸಂದರ್ಭ 7 Rights of medication ಸದಾಕಾಲ ಔಷಧಿಗಳ ಕೊರತೆ ಇರದ ಆಗೆ ವ್ಯವಸ್ಥಿತ drug Inventory ಮತ್ತು ದಾಸ್ತಾನು ಪಾಲನೆ. ಮುಂತಾದ ಕ್ರಮಗಳನ್ನು ಅನುಷ್ಠಾನಗೊಳಿಸಿ ಇವುಗಳನ್ನು ಮೌಲ್ಯಮಾಪನ ಮಾಡಲಾಗುತ್ತಿದೆ.

7. ಸರ್ಕಾರದ ಎಲ್ಲಾ ಆಸ್ಪತ್ರೆಗಳಲ್ಲಿ ಗುಣಮಟ್ಟದ ಹಾಗೂ ಸುವ್ಯವಸ್ಥಿತ ಆರೋಗ್ಯ ಸೇವಾ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಈಗಾಗಲೇ ಆದೇಶ ಹೊರಡಿಸಿ ಅನುಷ್ಠಾನಗೊಳಿಸಲು ಸೂಚಿಸಿದೆ.

ಉಪ ನಿರ್ದೇಶಕರು (...)
ಆರೋಗ್ಯ ಮತ್ತು ಕು.ಕ. ಸೇವೆಗಳ ನಿರ್ದೇಶನಾಲಯ
ಬೆಂಗಳೂರು-560 009

Scanned with CamScanner